ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್-ನಂತರದ ಮತ್ತು ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು, ಮೊರಾರ್ಜಿ ದೇಸಾಯಿ ವಸತಿಶಾಲೆ/ಕಾಲೇಜು ಹಾಗೂ ಆಶ್ರಮಶಾಲೆಗಳ ವಿದ್ಯಾರ್ಥಿಗಳಿಗೆ ಮಾಸಿಕ ಭೋಜನಾ ವೆಚ್ಚದ ದರಗಳನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ:-

1. 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂ.198
2. ಆಯುಕ್ತರು ಹಿಂದುಳಿದ ವರ್ಗಗಳ ಇಲಾಖೆ, ಬೆಂಗಳೂರು ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ BCWD-12047/1/2017-BCWD_HOSTEL-BCWD ದಿನಾಂಕ:31.03.2017

******

**ಪ್ರಸ್ತಾವನೆ:-**

ಮೇಲೆ ಓದಲಾದ (1)ರಲ್ಲಿ 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಕಂಡಿಕೆ 198ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್-ನಂತರದ ಮತ್ತು ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು, ಮೊರಾರ್ಜಿ ದೇಸಾಯಿ ವಸತಿಶಾಲೆ/ಕಾಲೇಜು ಹಾಗೂ ಆಶ್ರಮಶಾಲೆಗಳ ವಿದ್ಯಾರ್ಥಿಗಳಿಗೆ ಮಾಸಿಕ ಭೋಜನಾ ವೆಚ್ಚದ ದರಗಳನ್ನು "ಸರ್ಕಾರಿ ಹಾಸ್ಟೆಲ್‌ಗಳ /ವಸತಿ ಹಾಗೂ **ಆಶ್ರಮಶಾಲೆಗಳ ಆಹಾರ ಭತ್ಯೆಯನ್ನು ಪ್ರತಿ ವಿದ್ಯಾರ್ಥಿಗೆ ಮಾಸಿಕ 100 ರೂ.ಗಳಷ್ಟು ಹೆಚ್ಚಿಸಲಾಗಿದೆ"** ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ (2) ರಲ್ಲಿ, ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ರವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್-ನಂತರದ ಮತ್ತು ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು, ಮೊರಾರ್ಜಿ ದೇಸಾಯಿ ವಸತಿಶಾಲೆ/ಕಾಲೇಜು ಹಾಗೂ ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಹಾಗು ಅನಾಥಲಯಗಳ ವಿದ್ಯಾರ್ಥಿಗಳಿಗೆ ಮಾಸಿಕ ಭೋಜನಾ ವೆಚ್ಚದ ದರಗಳನ್ನು ಸರ್ಕಾರದ ಆದೇಶ ಸಂಖ್ಯೆ:ಹಿಂವಕ 352 ಬಿಎಂಎಸ್ 2016, ದಿನಾಂಕ:23.07.2016ರ ಸರ್ಕಾರದ ಆದೇಶದಲ್ಲಿ ಈ ಕೆಳಗಿನಂತೆ ಹೆಚ್ಚಿಸಿ, ಆದೇಶಿಸಲಾಗಿದೆ.

| ಕ್ರ. ಸಂ. | ಸಂಸ್ಥೆಗಳ ವಿವರ | ಪ್ರತಿ ವಿದ್ಯಾರ್ಥಿಗೆ ನೀಡುತ್ತಿದ್ದ ಮಾಸಿಕ ಭೋಜನಾ ವೆಚ್ಚ (ರೂ.ಗಳಲ್ಲಿ) | ಪ್ರತಿ ವಿದ್ಯಾರ್ಥಿಗೆ ಪರಿಷ್ಕರಿಸಿ, ರೂ.200/- ರಂತೆ ಹೆಚ್ಚಿಸಲಾಗಿದ್ದ ಮಾಸಿಕ ಭೋಜನಾ ವೆಚ್ಚ (ರೂ.ಗಳಲ್ಲಿ) |
|---|---|---|---|
| 1 | ಸರ್ಕಾರಿ ಮೆಟ್ರಿಕ್-ಪೂರ್ವ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ | 1100/- | 1300/- |
| 2 | ಸರ್ಕಾರಿ ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳ ಹಾಗೂ ವಸತಿಶಾಲೆ/ ವಸತಿ ಕಾಲೇಜುಗಳ ವಿದ್ಯಾರ್ಥಿಗಳಿಗೆ | 1200/- | 1400/- |
| 3 | ಸರ್ಕಾರಿ ಆಶ್ರಮಶಾಲೆಗಳು | 900/- | 1100/- |
| 4 | ಖಾಸಗಿ ಅನುದಾನಿತ ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ | 800/- | 1000/- |
| 5 | ಖಾಸಗಿ ಅನುದಾನಿತ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ | 900/- | 1100/- |
| 6 | ಖಾಸಗಿ ಅನುದಾನಿತ ಅನಾಥಾಲಯಗಳ ಮಕ್ಕಳಿಗೆ | 500/- | 700/- |

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 1148 ಮೆಟ್ರಿಕ್-ನಂತರದ, 1279 ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು 155 ವಸತಿಶಾಲೆ/ವಸತಿ ಕಾಲೇಜುಗಳ ಹಾಗೂ 20 ಆಶ್ರಮಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಒಟ್ಟು 2,20,121 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗಿದೆ. ವಿದ್ಯಾರ್ಥಿ ನಿಲಯ, ಆಶ್ರಮಶಾಲೆ, ವಸತಿಶಾಲೆ/ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಉಚಿತ ವಸತಿ ಸೌಲಭ್ಯಗಳೊಂದಿಗೆ ಊಟದ ವ್ಯವಸ್ಥೆ ಕಲ್ಪಿಸಲಾಗಿದೆ. ಪ್ರಸ್ತುತ ಮಾರುಕಟ್ಟೆಯಲ್ಲಿ ಆಹಾರ ಸಾಮಗ್ರಿಗಳ ದರಗಳು ಹೆಚ್ಚಳವಾಗಿರುವುದರಿಂದ ಹಾಲಿ ನೀಡಲಾಗುತ್ತಿರುವ ದರಗಳಲ್ಲಿ ವಿದ್ಯಾರ್ಥಿಗಳಿಗೆ ಪೌಷ್ಠಿಕ ಹಾಗೂ ಗುಣಮಟ್ಟದ ಆಹಾರ ನೀಡಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 198 ರಲ್ಲಿ ಮಾನ್ಯ ಮುಖ್ಯ ಮಂತ್ರಿಗಳು "ಸರ್ಕಾರಿ ಹಾಸ್ಟೆಲ್‌ಗಳ /ವಸತಿ ಹಾಗೂ ಆಶ್ರಮಶಾಲೆಗಳ ಆಹಾರ ಭತ್ಯೆಯನ್ನು ಪ್ರತಿ ವಿದ್ಯಾರ್ಥಿಗೆ ಮಾಸಿಕ 100 ರೂ.ಗಳಷ್ಟು ಹೆಚ್ಚಿಸಲಾಗಿದೆ" ಎಂದು ಘೋಷಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಸರ್ಕಾರಿ ಮೆಟ್ರಿಕ್-ನಂತರದ ಮತ್ತು ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳ ಹಾಗೂ ಮೊರಾರ್ಜಿ ದೇಸಾಯಿ ವಸತಿಶಾಲೆ/ವಸತಿ ಕಾಲೇಜುಗಳ ಮತ್ತು ಆಶ್ರಮಶಾಲೆಗಳ ಮಾಸಿಕ ಭೋಜನಾ ವೆಚ್ಚದ ದರಗಳನ್ನು 2017-18ನೇ ಸಾಲಿನ ಜೂನ್ ಮಾಹೆಯಿಂದ ಅನ್ವಯವಾಗುವಂತೆ ಹೆಚ್ಚಿಸಿ, ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತಾರ

ಮೇಲ್ಕಂಡ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ ಬಿಸಿಡಬ್ಲ್ಯೂ 363 ಬಿಎಂಎಸ್ 2017 ದಿನಾಂಕ: 09 .05.2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ:198ನ್ನು ಅನುಷ್ಠಾನಗೊಳಿಸಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್-ನಂತರದ ಮತ್ತು ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು, ಮೊರಾರ್ಜಿ ದೇಸಾಯಿ ವಸತಿಶಾಲೆ/ಕಾಲೇಜುಗಳು ಹಾಗೂ ಆಶ್ರಮಶಾಲೆಗಳ ವಿದ್ಯಾರ್ಥಿಗಳಿಗೆ ಮಾಸಿಕ ಭೋಜನಾ ವೆಚ್ಚದ ದರಗಳನ್ನು 2017-18ನೇ ಸಾಲಿನ ಜೂನ್ ಮಾಹೆಯಿಂದ ಅನ್ವಯವಾಗುವಂತೆ ಈ ಕೆಳಗಿನಂತೆ ಹೆಚ್ಚಿಸಿ, ಆದೇಶಿಸಿದೆ.

| ಕ್ರ. ಸಂ. | ಸಂಸ್ಥೆಗಳ ವಿವರ | ಪ್ರತಿ ವಿದ್ಯಾರ್ಥಿಗೆ ಹಾಲಿ ನೀಡುತ್ತಿರುವ ಮಾಸಿಕ ಭೋಜನಾ ವೆಚ್ಚದ ದರ | ಪ್ರತಿ ವಿದ್ಯಾರ್ಥಿಗೆ ಹೆಚ್ಚಿಸಲಾಗಿರುವ ಮಾಸಿಕ ಭೋಜನಾ ವೆಚ್ಚದ ದರ (ರೂ.ಗಳಲ್ಲಿ) |
|---|---|---|---|
| 1 | ಸರ್ಕಾರಿ ಮೆಟ್ರಿಕ್-ಪೂರ್ವ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ | 1300/- | 1400/- |
| 2 | ಸರ್ಕಾರಿ ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳು ಹಾಗೂ ಮೊರಾರ್ಜಿ ದೇಸಾಯಿ ವಸತಿಶಾಲೆ/ಕಾಲೇಜುಗಳ ವಿದ್ಯಾರ್ಥಿಗಳಿಗೆ | 1400/- | 1500/- |
| 3 | ಸರ್ಕಾರಿ ಆಶ್ರಮಶಾಲೆಗಳು | 1100/- | 1200/- |

ಸದರಿ ವೆಚ್ಚವನ್ನು2017-18ನೇ ಸಾಲಿನಲ್ಲಿ ಈ ಕೆಳಕಂಡ ಲೆಕ್ಕ ಶೀರ್ಷಿಕೆಗಳಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು

| ಕ್ರ. ಸಂ. | ಲೆಕ್ಕಶೀರ್ಷಿಕೆ | ವಲಯ | ಒದಗಿಸಿರುವ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಹೊಸ ವಿದ್ಯಾರ್ಥಿ ನಿಲಯಗಳ ಪ್ರಾರಂಭ ಮತ್ತು ನಿರ್ವಹಣೆ ಲೆಕ್ಕ ಶೀರ್ಷಿಕೆ 2225-03-277-2-53 | ರಾಜ್ಯವಲಯ | 17184.00 |
| 2 | ಹಿಂದುಳಿದ ವರ್ಗ ವಿದ್ಯಾರ್ಥಿ ನಿಲಯಗಳ ನಿರ್ವಹಣೆ. ಲೆಕ್ಕ ಶೀರ್ಷಿಕೆ 2225-00-103-0-26 | ಜಿಲ್ಲಾವಲಯ | 58238.66 |
| 3 | ಆಶ್ರಮ ಶಾಲೆಗಳು. ಲೆಕ್ಕ ಶೀರ್ಷಿಕೆ 2225-00-103-0-41 | ಜಿಲ್ಲಾವಲಯ | 372.79 |
| 4 | ಹಿಂದುಳಿದ ವರ್ಗದವರಿಗೆ ಹೊಸ ಮೊರಾರ್ಜಿ ದೇಸಾಯಿ ನಿವಾಸಿ ಶಾಲೆಗಳ ಪ್ರಾರಂಭ ಮತ್ತು ನಿರ್ವಹಣೆ ಲೆಕ್ಕ ಶೀರ್ಷಿಕೆ 2225-03-277-2-62 | ರಾಜ್ಯವಲಯ | 18970.00 |
| 5 | ಶಿಕ್ಷಣ ಇಲಾಖೆಯಿಂದ ವರ್ಗಾವಣೆಗೊಂಡ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು (ಎಂ.ಡಿ.ಆರ್.ಎಸ್.)-ಹಿಂದುಳಿದ ವರ್ಗಗಳು ಲೆಕ್ಕ ಶೀರ್ಷಿಕೆ 2225-03-277-2-77 | ರಾಜ್ಯವಲಯ | 439.00 |

ಷರತ್ತು:-

ಈ ಕಾರ್ಯಕ್ರಮವನ್ನು ಮಾರ್ಗಸೂಚಿಯನ್ವಯ ನಿಯಮಾನುಸಾರ ಮತ್ತು ಪಾರದರ್ಶಕತೆಯನ್ವಯ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 210 ವೆಚ್ಚ-3/ 2017, ದಿನಾಂಕ:26.04.2017ರಲ್ಲಿ ಹಾಗೂ ಯೋಜನ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿ 30 ಐಎಂಎಂ 2017, ದಿನಾಂಕ:25.04.2017ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಇವರಿಗೆ:-

1. ಸಂಕಲನಕಾರರು, ಕರ್ನಾಟಕ ರಾಜಯ ಪತ್ರ- ಮುಂದಿನ ವಿಶೇಷ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸುವಂತೆ ಕೋರಿದೆ.
2. ಮಹಾಲೇಖಪಾಲರು.(ಎ ಮತ್ತು ಇ) (ಲೆಕ್ಕಪರಿಶೋಧನೆ-1 ಮತ್ತು 2) ಕರ್ನಾಟಕ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ ಆರ್ಥಿಕ ಇಲಾಖೆ (ವೆಚ್ಚ) ಮತ್ತು (ಆಯವ್ಯಯ ಸಂಪನ್ಮೂಲ). ವಿಧಾನ ಸೌಧ, ಬೆಂಗಳೂರು
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
8. ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು
9. ರಾಜ್ಯದ ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.

(6–9: ಆಯುಕ್ತರು, ಹಿಂವಕ, ಇವರ ಮುಖಾಂತರ)

ಪ್ರತಿ ಮಾಹಿತಿಗಾಗಿ

1. ಮಾನ್ಯ ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ
2. ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ
3. ಸರ್ಕಾರದ ಉಪ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು